## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ರಾಜಣ್ಣ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಜಾಲಿಗೆ ಗ್ರಾಮ ಪಂಚಾಯಿತಿ, ದೇವನಹಳ್ಳಿ ತಾ: ಹಾಲಿ ಸಹಾಯಕ ನಿರ್ದೇಶಕರು (ಗ್ರಾಮೀಣ ಉದ್ಯೋಗ) ತಾಲ್ಲೂಕು ಪಂಚಾಯಿತಿ, ಬಾಲ್ಕಿ, ಬೀದರ್ ಜಿಲ್ಲೆ (ಅಮಾನತ್ತಿನಲ್ಲಿರುವ) ಇವರ ವಿರುದ್ಧ ಇಲಾಖಾ ವಿಚಾರಣೆ- ಮಂಡನಾಧಿಕಾರಿ ಬದಲಾವಣೆ ಆದೇಶ.

ಓದಲಾಗಿದೆ:- 1) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 02 ಕೆಎಸ್ಎಸ್ 2015 ದಿ:15.04.2016.

2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತ್ ಇವರ ಪತ್ರ ದಿ:06.05.2016.

---------

ಪ್ರಸ್ತಾವನೆ:-

ಶ್ರೀ ರಾಜಣ್ಣ, ಸಹಾಯಕ ನಿರ್ದೇಶಕರು (ಗ್ರಾಮೀಣ ಉದ್ಯೋಗ), ತಾಲ್ಲೂಕು ಪಂಚಾಯಿತಿ, ಭಾಲ್ಕಿ, ಬೀದರ್ ಜಿಲ್ಲೆ (ಪ್ರಸ್ತುತ ಅಮಾನತ್ತಿನಲ್ಲಿ) ಇವರು ಈ ಹಿಂದೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯಾಗಿ ಜಾಲಿಗೆ ಗ್ರಾಮ ಪಂಚಾಯಿತಿ, ದೇವನಹಳ್ಳಿ ತಾಲ್ಲೂಕು, ಇಲ್ಲಿ ಕಾರ್ಯನಿರ್ವಹಿಸುತ್ತಿದ್ದಾಗ ಗ್ರಾಮ ಪಂಚಾಯಿತಿಗೆ ಸಂಬಂಧಿಸಿದ ಹಣವನ್ನು ವಸೂಲಿ ಮಾಡದ ನಂತರ ಅದನ್ನು ಸರ್ಕಾರದ ಲೆಕ್ಕಕ್ಕೆ ಜಮಾ ಮಾಡದೇ ರೂ.76,81,720/-ಗಳ ಬೃಹತ್ ಪ್ರಮಾಣದ ಮೊತ್ತವನ್ನು ದುರುಪಯೋಗಪಡಿಸಿಕೊಂಡಿರುವುದು ಮೇಲ್ನೋಟಕ್ಕೆ ಕಂಡುಬಂದಿರುವುದಲ್ಲದೇ ಸದರಿ ಅಧಿಕಾರಿಯು ತನಿಖೆಗೆ ವೋಚರ್‌ಗಳನ್ನು ಹಾಜರುಪಡಿಸದೇ ಬೃಹತ್ ಪ್ರಮಾಣದ ಮೊತ್ತ ರೂ.3,30,40,749/-ಗಳ ಆಕ್ಷೇಪಣೆಗೆ ಒಳಪಡಲು ಕಾರಣರಾಗಿ, ಜೊತೆಗೆ ಸದರಿಯವರು ನಿಗದಿತ ಮೊತ್ತಕ್ಕಿಂತ ರೂ.7,13,573/-ಗಳನ್ನು ಕಡಿಮೆ ವಸೂಲು ಮಾಡುವ ಮೂಲಕ ಸರ್ಕಾರಕ್ಕೆ ಆರ್ಥಿಕ ನಷ್ಟ ಉಂಟು ಮಾಡಿದ್ದು, ಈ ಎಲ್ಲಾ ಆರೋಪಗಳಿಗೆ ಸಂಬಂಧಿಸಿದಂತೆ ಸದರಿ ಅಧಿಕಾರಿಯ ವಿರುದ್ಧ ವಿವರವಾದ ಇಲಾಖಾ ವಿಚಾರಣೆಯನ್ನು ನಡೆಸಲು ಸರ್ಕಾರವು ಮೇಲೆ ಓದಲಾದ ದಿನಾಂಕ 15.04.2016ರ ಆದೇಶದಲ್ಲಿ ಶ್ರೀ ಎಂ.ಜಿ.ಹಿರೇಮಠ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಬೆಂಗಳೂರು ಇವರನ್ನು ಇಲಾಖಾ ವಿಚಾರಣಾಧಿಕಾರಿಯನ್ನಾಗಿ ಹಾಗೂ ಉಪ ಕಾರ್ಯದರ್ಶಿ(ಆಡಳಿತ), ಜಿಲ್ಲಾ ಪಂಚಾಯತ್, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಲಾಗಿತ್ತು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತ್ ಇವರು ದಿನಾಂಕ 06.05.2016ರ ಪತ್ರದಲ್ಲಿ ಸದರಿ ಪ್ರಕರಣದಲ್ಲಿ ಮಂಡನಾಧಿಕಾರಿಯನ್ನಾಗಿ ನೇಮಿಸಲಾಗಿರುವ ಉಪ ಕಾರ್ಯದರ್ಶಿ(ಆಡಳಿತ) ಹುದ್ದೆಯ ನಿರ್ವಹಣೆಗೆ ಒಬ್ಬರೇ ಇರುವುದರಿಂದ ಸದರಿ ಅಧಿಕಾರಿಗಳು ಆಡಳಿತ, ಅಭಿವೃದ್ಧಿ ಹಾಗೂ ಪರಿಷತ್ ಶಾಖೆಗಳ ಕಾರ್ಯನಿರ್ವಹಣೆ ಜೊತೆಗೆ ವಿವಿಧ ಯೋಜನೆಗಳ ಅನುಷ್ಠಾನಗೊಳಿಸುವ ಜವಾಬ್ದಾರಿಯನ್ನು ಹೊಂದಿದ್ದು, ಇದರ ಜೊತೆಗೆ ಯೋಜನಾ ನಿರ್ದೇಶಕರ ಪ್ರಭಾರವನ್ನು ಸಹ ನಿರ್ವಹಣೆ ಮಾಡುತ್ತಿರುವುದರಿಂದ ಉಪ ಕಾರ್ಯದರ್ಶಿಯವರನ್ನು ಮಂಡನಾಧಿಕಾರಿ ಕಾರ್ಯನಿರ್ವಹಣೆಗೆ ಮಾಡಿರುವ ಆದೇಶವನ್ನು ಮಾರ್ಪಾಡು ಮಾಡಿ ಸಹಾಯಕ ಕಾರ್ಯದರ್ಶಿ, ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತ್, ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸುವಂತೆ ಕೋರಿರುತ್ತಾರೆ.

ಆದ್ದರಿಂದ, ಸದರಿಯವರ ಬದಲಿಗೆ ಸಹಾಯಕ ಕಾರ್ಯದರ್ಶಿ, ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತ್, ಇವರನ್ನು ಮಂಡನಾಧಿಕಾರಿಯನ್ನಾಗಿ ಮಾಡಲು ಸರ್ಕಾರವು ತೀರ್ಮಾನಿಸಿದೆ. ಆದ್ದರಿಂದ ಈ ಕೆಳಕಂಡ ಆದೇಶ.

ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 02 ಕೆಎಸ್ಎಸ್ 2016, ಬೆಂಗಳೂರು ದಿನಾಂಕ:-08.08.2016

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 02 ಕೆಎಸ್ಎಸ್ 2016 ದಿನಾಂಕ 15.04.2016ರಲ್ಲಿ ಉಪ ಕಾರ್ಯದರ್ಶಿ (ಆಡಳಿತ), ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತ್, ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಿದ್ದನ್ನು ರದ್ದುಪಡಿಸಿ, ಸಹಾಯಕ ಕಾರ್ಯದರ್ಶಿ, ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತ್, ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಿದೆ.

ಮಂಡನಾಧಿಕಾರಿಯವರು ಕೂಡಲೇ ವಿಚಾರಣಾಧಿಕಾರಿಯವರನ್ನು ಸಂಪರ್ಕಿಸಿ, ಇಲಾಖಾ ವಿಚಾರಣೆಯನ್ನು ತ್ವರಿತವಾಗಿ ಕೈಗೊಂಡು 3 ತಿಂಗಳೊಳಗಾಗಿ ಪೂರ್ಣಗೊಳಿಸಿ, ವರದಿಯನ್ನು ಸಲ್ಲಿಸುವ ದಿಸೆಯಲ್ಲಿ ಅಗತ್ಯ ಕ್ರಮ ಕೈಗೊಳ್ಳುವಂತೆ ಈ ಮೂಲಕ ಸೂಚಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

8/8/2016

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ
(ಸೇವೆಗಳು-ಬಿ & ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಗೆ:-

1. ಮಹಾಲೇಖಪಾಲರು, (ಎ & ಇ) ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು ಗ್ರಾಮಾಂತರ/ಬೀದರ್.
3. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ದೇವನಹಳ್ಳಿ/ಭಾಲ್ಕಿ.
4. ಶ್ರೀ ಎಂ.ಜಿ.ಹಿರೇಮಠ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ನಂ.746 15ನೇ ಮೈನ್, ಜುಡಿಷಿಯಲ್ ಲೇಔಟ್, ಅಲ್ಲಾಳಸಂದ್ರ, ಜಿಕೆವಿಕೆ ಪೋಸ್ಟ್, ಬೆಂಗಳೂರು-560 065.
5. ಶ್ರೀ ರಾಜಣ್ಣ, ಸಹಾಯಕ ನಿರ್ದೇಶಕರು (ಗ್ರಾಮೀಣ ಉದ್ಯೋಗ), ತಾಲ್ಲೂಕು ಪಂಚಾಯಿತಿ, ಭಾಲ್ಕಿ (ಪ್ರಸ್ತುತ ಅಮಾನತ್ತಿನಲ್ಲಿ) ಇವರಿಗೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೀದರ್ ಇವರ ಮುಖಾಂತರ.

ಪ್ರತಿಯನ್ನು ಮಾಹಿತಿಗಾಗಿ:-

1) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗೆ.
2) ಜಂಟಿ ಕಾರ್ಯದರ್ಶಿ (ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಇವರ ಆಪ್ತ ಶಾಖೆಗೆ
2) ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.
3) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.